# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಅಂತ್ಯಸಂಸ್ಕಾರ ಸಹಾಯ ನಿಧಿ ಯೋಜನೆಯನೆಯಡಿ ಸೌಲಭ್ಯ ಕೋರಿ ಮರಣ ಸಂಭವಿಸಿದ ದಿನಾಂಕದಿಂದ ಒಂದು ತಿಂಗಳೊಳಗೆ ಅರ್ಜಿ ಸಲ್ಲಿಸಲು ನಿಗಧಿಪಡಿಸಲಾಗಿದ್ ಕಾಲಾವಕಾಶವನ್ನು ಎರಡು ತಿಂಗಳಿಗೆ ಹೆಚ್ಚಿಸುವ ಕುರಿತು.

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 20 ಎಂಎಸ್‌ಟಿ 2006 ದಿನಾಂಕ:08/06/2006

2. ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 83 ಡಿಎಸ್‌ಪಿ 2015 ದಿನಾಂಕ:14/08/2015

********

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ಆದೇಶದಲ್ಲಿ, ಬಡತನ ರೇಖೆಗಿಂತ ಕೆಳಮಟ್ಟದಲ್ಲಿರುವ ಕುಟುಂಬದ ಯಾವುದೇ ಸದಸ್ಯರು ಮರಣ ಹೊಂದಿದಲ್ಲಿ ಮೃತಪಟ್ಟ ವ್ಯಕ್ತಿಯ ವಾರಸುದಾರರು/ಅಂತ್ಯಕ್ರಿಯೆ ನೆರವೇರಿಸುವ ಜವಾಬ್ದಾರಿ ಇರುವ ಸದಸ್ಯರು ಅಥವಾ ಅವಲಂಬಿತರಿಗೆ ಮೃತರ ಅಂತ್ಯಕ್ರಿಯೆ ನೆರವಿಗಾಗಿ ಆರ್ಥಿಕ ಸಹಾಯ ಒದಗಿಸಲು ಅಂತ್ಯಸಂಸ್ಕಾರ ಸಹಾಯ ನಿಧಿ ಯೋಜನೆಯನ್ನು ಅನುಷ್ಠಾನಗೊಳಿಸಿದೆ.

2015-16ನೇ ಸಾಲಿನಿಂದ ಅಂತ್ಯಸಂಸ್ಕಾರ ಯೋಜನೆಯಡಿ ನೀಡಲಾಗುತ್ತಿದ್ದ ಸಹಾಯಧನ ಮೊತ್ತವನ್ನು ರೂ.1000/-ಗಳಿಂದ ರೂ.5000/-ಗಳಿಗೆ ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಆದೇಶದನ್ವಯ ಹೆಚ್ಚಿಸಿ ಆದೇಶಿಸಿದೆ ಹಾಗೂ ಈ ಯೋಜನೆಯ ಅನುಷ್ಠಾನ ಕುರಿತಂತೆ ಅನುಸರಿಸಬೇಕಾಗಿರುವ ಮಾರ್ಗಸೂಚಿಯನ್ನು ಹೊರಡಿಸಿದೆ.

ಈ ಯೋಜನೆಯಡಿ ಸಹಾಯಧನವನ್ನು ಪಡೆಯುವ ಸಲುವಾಗಿ ಅರ್ಜಿ ಸಲ್ಲಿಸಲು ಒಂದು ತಿಂಗಳ ಕಾಲಾವಕಾಶ ನೀಡಿದ್ದು, ಅಂತ್ಯಸಂಸ್ಕಾರದ ಕೆಲವು ದಿನಗಳಲ್ಲಿ ಕುಟುಂಬ ಸದಸ್ಯರು ಉತ್ತರಕ್ರಿಯೆ ಇತರೆ ಕೆಲಸ ಕಾರ್ಯಗಳಲ್ಲಿ ಮಗ್ನರಾಗಿರುತ್ತಾರೆ. ಹೀಗಾಗಿ ಬಡಕುಟುಂಬಗಳು ದುಃಖದ ಪರಿಸ್ಥಿತಿಯಲ್ಲಿರುವಾಗ ಒಂದು ತಿಂಗಳೊಳಗೆ ಅರ್ಜಿ ಸಲ್ಲಿಸುವುದು ಕಷ್ಟವಾಗಿರುವುದಾಗಿ ಮತ್ತು ತುಂಬಾ ಕುಟುಂಬಗಳಿಗೆ ತೊಂದರೆಯಾಗುತ್ತಿರುವುದರಿಂದ ಅರ್ಜಿ ಸಲ್ಲಿಸಲು ಇರುವ ಕಾಲಾವಧಿಯನ್ನು ವಿಸ್ತರಿಸುವಂತೆ ಕೋರಿ ಮನವಿಗಳು ಬಂದಿರುತ್ತವೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಈ ಯೋಜನೆಯಡಿಯಲ್ಲಿ ಸಹಾಯಧನವನ್ನು ಪಡೆಯಲು ಮೃತಪಟ್ಟ ವ್ಯಕ್ತಿಯ ವಾರಸುದಾರರು/ಅಂತಿಮ ಕ್ರಿಯೆ ನೆರವೇರಿಸುವ ಜವಾಬ್ದಾರಿಯುತ ಸದಸ್ಯರು ಅಥವಾ ಅವಲಂಬಿತರು ಅರ್ಜಿ ಸಲ್ಲಿಸಲು ಅನುವಾಗುವಂತೆ ಈಗಿರುವ ಒಂದು ತಿಂಗಳ ಕಾಲಾವಕಾಶವನ್ನು ವಿಸ್ತರಿಸುವುದು ಸೂಕ್ತವೆನಿಸಿ, ಸರ್ಕಾರವು ಕೆಳಕಂಡಂತೆ ಆದೇಶಿಸಿದೆ:

## ಸರ್ಕಾರದ ಆದೇಶ ಸಂಖ್ಯೆ:ಆರ್‌ಡಿ 51 ಡಿಎಸ್‌ಪಿ 2017, ಬೆಂಗಳೂರು; ದಿನಾಂಕ:31/05/2017

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಸರ್ಕಾರಿ ಆದೇಶ ಸಂಖ್ಯೆ: ಕಂಇ 83 ಡಿಎಸ್‌ಪಿ 2015 ದಿನಾಂಕ:14.08.2015ರೊಂದಿಗೆ ಹೊರಡಿಸಲಾದ "ಅಂತ್ಯಸಂಸ್ಕಾರ ಸಹಾಯನಿಧಿ

ಯೋಜನೆ"ಯ ಮಾರ್ಗಸೂಚಿಯಲ್ಲಿನ ಕ್ರಮ ಸಂಖ್ಯೆ-3 ರಲ್ಲಿ "ಈ ಯೋಜನೆಯಡಿ ಸೌಲಭ್ಯ ಕೋರಿ ಮರಣ ಸಂಭವಿಸಿದ ದಿನಾಂಕದಿಂದ ಒಂದು ತಿಂಗಳೊಳಗೆ ಅರ್ಜಿ ಸಲ್ಲಿಸತಕ್ಕದ್ದು" ಎಂದಿರುವುದನ್ನು "ಈ ಯೋಜನೆಯಡಿ ಸೌಲಭ್ಯ ಕೋರಿ ಮರಣ ಸಂಭವಿಸಿದ ದಿನಾಂಕದಿಂದ **ಎರಡು ತಿಂಗಳೊಳಗೆ** ಅರ್ಜಿ ಸಲ್ಲಿಸತಕ್ಕದ್ದು" ಎಂದು ಮಾರ್ಪಡಿಸಿ, ದಿನಾಂಕಃ 01/06/2017ರಿಂದ ಜಾರಿಗೆ ಬರುವಂತೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೆ. ಉಮಾಪತಿ)
ಸರ್ಕಾರದ ಉಪ ಕಾರ್ಯದರ್ಶಿ
ಕಂದಾಯ ಇಲಾಖೆ
(ವಿ.ನಿ ಹಾಗೂ ನೋಂ&ಮು)

ಇವರಿಗೆ:-

ಸಂಕಲನಕಾರರು, ಕರ್ನಾಟಕ ವಿಶೇಷ ರಾಜ್ಯಪತ್ರ, ಬೆಂಗಳೂರು, ಇವರಿಗೆ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 100 ಪ್ರತಿಗಳನ್ನು ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯ, ಕಂದಾಯ ಭವನ, ಬೆಂಗಳೂರು ಇವರಿಗೆ ಕಳುಹಿಸಬೇಕೆಂದು ಕೋರಿದೆ.

ಪ್ರತಿಯನ್ನು

1. ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿಗಳು,(ಆಯವ್ಯಯ ಮತ್ತು ಸಂಪನ್ಮೂಲ) ವಿಧಾನ ಸೌಧ, ಬೆಂಗಳೂರು.
5. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಕಲಬುರ್ಗಿ.
6. ಎಲ್ಲಾ ಜಿಲ್ಲಾಧಿಕಾರಿಗಳು,
7. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
8. ಎಲ್ಲಾ ಉಪ ವಿಭಾಗಾಧಿಕಾರಿಗಳು/ತಹಸೀಲ್ದಾರರು.
9. ಎಲ್ಲಾ ಜಿಲ್ಲಾ ಖಜಾನೆ ಹಾಗೂ ಉಪ ಖಜಾನೆ ಅಧಿಕಾರಿಗಳು,
10. ಹೆಚ್ಚುವರಿ ಪ್ರತಿ ಮತ್ತು ರಕ್ಷಾ ಕಡತ.